ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಲೋಕೋಪಯೋಗಿ ಇಲಾಖೆಯಿಂದ ಭೂ ಸ್ವಾಧೀನ ಮಾಡಿಕೊಂಡಿರುವ ಬಗ್ಗೆ

ಶ್ರೀರಘುನಾಥ್‌ರಾವ್‌ಮಲ್ಕಾಪೂರೆ(ವಿಧಾನಸಭೆಯಿಂದಚುನಾಯಿತರಾದವರು):-

215 (293) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಔರದ್ ತಾಲ್ಲೂಕಿನ ಸರ್ವೆ ನಂ. 163 ರಲ್ಲಿನ ಜಮೀನನ್ನು ಲೋಕೋಪಯೋಗಿ ಇಲಾಖೆಯ ಪ್ರವಾಸಿ

ಮಂದಿರ ನಿರ್ಮಾಣಕ್ಕೆ ಭೂ ಮಾಲೀಕರಿಂದ ಯಾವಾಗ ಭೂಸ್ವಾಧೀನ ಮಾಡಿಕೊಳ್ಳಲಾಗಿದೆ ; (ಭೂ ಸ್ವಾಧೀನ ಮಾಡಿಕೊಂಡಿದ್ದಲ್ಲಿ, ದಿನಾಂಕ ಮತ್ತು ಗುಂಟೆವಾರು, ಒಪ್ಪಂದದ ಕರಾರು ಪತ್ರದೊಂದಿಗೆ ಸ್ಪಷ್ಟ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಈ ಸರ್ವೆ ನಂಬರಿನಲ್ಲಿ ಪ್ರವಾಸಿಮಂದಿರ ನಿರ್ಮಿಸಿದ ನಂತರ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಅಧಿಕಾರ ದುರಪಯೋಗ ಮಾಡಿಕೊಂಡು ಅಳತೆ ಮಾಡದೆ ಹಾಗೂ ಭೂ ಮಾಲೀಕರ ಗಮನಕ್ಕೆ ತರದೆ ಅನಧಿಕೃತವಾಗಿ ಕಾಂಪೌಂಡ್‌ವಾಲ್ ನಿರ್ಮಿಸಿದ್ದು ನಿಜವಲ್ಲವೇ ; (ಮಾಹಿತಿ ನೀಡುವುದು)

(ಇ) ಸರ್ವೆ ನಂ. 163 ರಲ್ಲಿ ಲೋಕೋಪಯೋಗಿ ಇಲಾಖೆಯವರು ಅತಿಕ್ರಮಣ ಮಾಡಿಕೊಂಡು ನಿರ್ಮಿಸಿದ ಕಾಂಪೌಂಡ್‌ವಾಲ್ ತೆರವುಗೊಳಿಸಿ ಭೂ ಮಾಲೀಕರಿಗೆ ಎಷ್ಟು ದಿನಗಳಲ್ಲಿ ವಶಕ್ಕೆ ನೀಡಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)